# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 04/09/2021ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ–ಸಭೆ –08/2021–22 ದಿನಾಂಕ:04/09/2021

ದಿನಾಂಕ: 04/09/2021 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ–ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 4 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 5 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬೆಂಗಳೂರು ಜಲ ಮಂಡಳಿ |
| 6 | ಶ್ರೀ ಕೃಷ್ಣನಾಯಕ್ | ಕೆಲಸಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |



Scanned by CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂಗ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು. ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ **ಬೆಂಗಳೂರು ವಿದ್ಯುತ್ ಸರಬರಾಜು ನಿಗಮ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿ.ಹೆಚ್.ಇ.ಎಲ್. ಬಸಪ್ಪ ಬಡಾವಣೆ, 3ನೇ ಅಡ್ಡರಸ್ತೆಯಲ್ಲಿ, ವಿದ್ಯುತ್ ಕಂಬಕ್ಕೆ ಅಳವಡಿಸಿರುವ ಟ್ರಾನ್ಸ್‌ಫಾರ್‌ಮರ್‌ನ ಕಂಟ್ರೋಲ್ ಬಾಕ್ಸ್ ಬಾಗಿಲುಗಳು ಕಿತ್ತುಹೋಗಿದ್ದು, ಇದರಿಂದಾಗಿ ರಸ್ತೆಯಲ್ಲಿ ಓಡಾಡುವ ಸಾರ್ವಜನಿಕರಿಗೆ ವಿದ್ಯುತ್ ಸ್ಪರ್ಶವಾಗುವ ಹಾಗೂ ಪ್ರಾಣಾಪಾಯ ಸಂಭವಿಸುವ ಸಾಧ್ಯತೆ ಇದ್ದು, ಸದರಿ ಬಾಕ್ಸ್‌ನ್ನು ದುರಸ್ಥಿಪಡಿಸಲು ಮತ್ತು ಬಸಪ್ಪ ಬಡಾವಣೆಯ ಮುಖ್ಯರಸ್ತೆಯಲ್ಲಿ ಬೆಸ್ಕಾಂ ಕೇಬಲ್‌ನ್ನು ಚರಂಡಿ ಒಳಗಡೆ ಅಳವಡಿಸಿದ್ದು, ಸದರಿ ಕೇಬಲ್‌ನ್ನು ಸರಿಯಾದ ರೀತಿಯಲ್ಲಿ ಅಳವಡಿಸಿ ಮುಚ್ಚಲಾಗಿರುವುದಿಲ್ಲವೆಂದು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಾರ್ವಜನಿಕರಿಗೆ ತೊಂದರೆ ಉಂಟಾಗದಂತೆ ಅಗತ್ಯ ಕ್ರಮವನ್ನು ಕೈಗೊಳ್ಳಲು ಬೆಸ್ಕಾಂ ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗುವುದೆಂದು ತಿಳಿಸಿದರು.



Scanned by CamScanner

❖ **ಅರಣ್ಯ ವಿಭಾಗ, ಬಿಬಿಎಂಪಿ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಮರದ ಕೊಂಬೆಗಳು ಬೃಹತ್ ಆಕಾರದಲ್ಲಿ ಬೆಳೆದು ವಿದ್ಯುತ್ ಬೀದಿ ದೀಪಗಳ ಬೆಳಕು ರಸ್ತೆಯ ಮೇಲೆ ಬೀಳದೆ ರಾತ್ರಿ ಸಮಯದಲ್ಲಿ ಕತ್ತಲು ಆವರಿಸಿರುವ ಬಗ್ಗೆ ಸಭೆಗೆ ತಿಳಿಸಲಾಯಿತು. ಈ ಸಂಬಂಧ ಅರಣ್ಯ ವಿಭಾಗದ ಅಧಿಕಾರಿಗಳ ಗಮನಕ್ಕೆ ತರಲಾಗುವುದೆಂದು ಸಭೆಗೆ ತಿಳಿಸಲಾಯಿತು.

❖ **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿ.ಹೆಚ್.ಇ.ಎಲ್. ಬಸಪ್ಪ ಬಡಾವಣೆಯಲ್ಲಿನ 2ನೇ ಅಡ್ಡರಸ್ತೆಯಲ್ಲಿ ವಿದ್ಯುತ್ ದೀಪಗಳು ಕಾರ್ಯನಿರ್ವಹಿಸುತ್ತಿಲ್ಲವೆಂದು ಸಭೆಗೆ ತಿಳಿಸಿದರು. ಈ ಸಂಬಂಧ ಬಿ.ಬಿಎಂ.ಪಿ.ಯ ವಿದ್ಯುತ್ ವಿಭಾಗದ ವಾರ್ಡ್ ನಂ.198ರ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರು ಸಭೆಗೆ ಗೈರಾಗಿರುವುದನ್ನು ಗಮನಿಸಲಾಯಿತು. ಈ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗುವುದೆಂದು ಸಭೆಗೆ ತಿಳಿಸಿದರು.

❖ **ಘನತ್ಯಾಜ್ಯ ನಿರ್ವಹಣೆ ಬಗ್ಗೆ:-** ವಾರ್ಡ್ ನಂ.198ರಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಮಹಿಳಾ ಪೌರ ಕಾರ್ಮಿಕರು ಸಮರ್ಪಕವಾಗಿ ಸ್ವಚ್ಛತಾ ಕಾರ್ಯವನ್ನು ನಿರ್ವಹಿಸುತ್ತಿರುವುದಿಲ್ಲವೆಂದು ಮತ್ತು ಮೇಲ್ವಿಚಾರಕರನ್ನು ಬದಲಾಯಿಸಬೇಕೆಂದು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.



Scanned by CamScanner

5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.ಪ
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner